**ಅಪರ ನ್ಯಾಯಿಕ ದಂಡಾಧಿಕಾರಿ ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ ಮಾಗಡಿ**

**ಕ್ರಿಮಿನಲ್ ಪ್ರಕರಣ ಸಂಖ್ಯೆ : 3413 / 2021**

ಪಿರ್ಯಾದುದಾರರು : ಕುದೂರು ಪೋಲಿಸು ಠಾಣೆ

**ವಿರುದ್ಧ**

**ಆರೋಪಿಗಳು : ಶಿವಕುಮಾರ್**

**ಚಾಸಾ :- 01 / ಪ್ರಾಸಾ :- 01**

| | |
|---|---|
| ಹೆಸರು | **ಪ್ರಕಾಶ್** |
| ತಂದೆಯ / ಗಂಡನ ಹೆಸರು | **ಲೇಟ್ ಮುನಿಯಪ್ಪ** |
| ವಯಸ್ಸು | **32** |
| ಉದ್ಯೋಗ | **ಚಾಲಕ** |
| ವಿಳಾಸ | **ಒಂಭತ್ತನಗುಂಟೆ** |

**ದಿನಾಂಕ: 07-11-2023 ರಂದು** ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ :- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ :-**

ದಿನಾಂಕ: 26-01-2020 ರಂದು ಸುಮಾರು ಬೆಳಿಗ್ಗೆ 10.55 ಗಂಟೆಯ ಸಮಯದಲ್ಲಿ ನಾನು ಕುದೂರಿಗೆ ಹೋಗಲು ಒಂಭತ್ತನಗುಂಟೆ ಬಸ್ ನಿಲ್ದಾಣದ ಬಳಿ ನಾನು, ಚಾಸಾ-7 ಮತ್ತು ನನ್ನ ಮಗ ಪುನೀತ್ ರವರು ರಸ್ತೆಯ ಎಡಬದಿಯಲ್ಲಿ ನಿಂತ್ತಿದ್ದು, ಕುದೂರು ಕಡೆಯಿಂದ ಒಂದು ಬಸ್ ಬಂದಿದ್ದು, ಆಗ ಟಾಟಾ ಎಸಿ ಕೆಎ-02-ಎಹೆಚ್-0319 ವಾಹನವು ಅತಿವೇಗ ಮತ್ತು ಅಜಾಗರೂಕತೆಯಿಂದ ಬಂದು ನನ್ನ ಮಗನಿಗೆ ಹಾಗೂ ನನ್ನ ಹೆಂಡತಿ ಚಾಸಾ-7 ರವರಿಗೆ ಡಿಕ್ಕಿ ಪಡಿಸಿದ ಪರಿಣಾಮ ನನ್ನ ಮಗನಿಗೆ ತಲೆಗೆ, ಹೊಟ್ಟೆಭಾಗ, ದೇಹದ ಇತರ ಭಾಗಗಳಿಗೆ ತೀವ್ರ ಸ್ವರೂಪದ ರಕ್ತಗಾಯಗಳಾಗಿದ್ದು, ನನ್ನ ಹೆಂಡತಿ ಚಾಸಾ-

**ಸಿ.ಸಿ. ಸಂಖ್ಯೆ: 3413/2021**
**ಚಾಸಾ-01 / ಪ್ರಾಸಾ-01**

7 ರವರಿಗೆ ಸ್ವಲ್ಪ ತರಚಿದ ಗಾಯ ಹಾಗೂ ಸಣ್ಣಪುಟ್ಟ ಪೆಟ್ಟಾಗಿರುತ್ತದೆ. ನಂತರ ಆರೋಪಿ ಟಾಟ ಏಸಿ ಚಾಲಕ ವಾಹನವನ್ನು ಅಲ್ಲಿಯೇ ನಿಲ್ಲಿಸಿ ಓಡಿ ಹೋಗಿರುತ್ತಾರೆ. ಈ ದಿವಸ ನ್ಯಾಯಾಲಯದ ಮುಂದಿರುವ ಆರೋಪಿಯೇ ಆ ದಿವಸ ಅಪಘಾತ ಪಡಿಸಿದ ವಾಹನ ಚಾಲನೆ ಮಾಡುತ್ತಿದ್ದ ವ್ಯಕ್ತಿ ಎಂದು ಗುರುತಿಸಿರುತ್ತಾರೆ. ನಂತರ ನಾನು ಸೋಲೂರಿನ ಸ್ನೇಹಾಲಯ ಆಸ್ಪತ್ರೆಗೆ ಕರೆದುಕೊಂಡು ಹೋಗಿ ಪ್ರಥಮ ಚಿಕಿತ್ಸೆ ಕೊಡಿಸಿರುತ್ತೇನೆ. ನಂತರ ಅಲ್ಲಿಂದ ಹೆಚ್ಚಿನ ಚಿಕಿತ್ಸೆಗಾಗಿ ನೆಲಮಂಗಲದ ಮಾತೃಶ್ರೀ ಆಸ್ಪತ್ರೆಗೆ ಕರೆದುಕೊಂಡು ಹೋಗಿರುತ್ತೇನೆ. ಆ ನಂತರ ಅಲ್ಲಿಂದ ಹೆಚ್ಚಿನ ಚಿಕಿತ್ಸೆಗಾಗಿ ಬೆಂಗಳೂರಿನ ಕಣ್ವ ಆಸ್ಪತ್ರೆಗೆ ಕರೆದುಕೊಂಡು ಹೋಗಿ ಚಿಕಿತ್ಸೆ ಕೊಡಿಸಿರುತ್ತೇನೆ. ನಂತರ ಹಣದ ಕೊರತೆಯಿಂದ ಕೆ.ಸಿ. ಜನರಲ್ ಸರ್ಕಾರಿ ಆಸ್ಪತ್ರೆಗೆ ಹೋಗಿ ದಾಖಲು ಮಾಡಿರುತ್ತೇನೆ. ನಂತರ ದಿನಾಂಕಃ 15-02-2020 ರಂದು ನನ್ನ ಮಗ ಪುನೀತ್ ರವರು ಗುಣಮುಖವಾಗದೇ ರಾತ್ರಿ 12.30 ರ ಸಮಯದಲ್ಲಿ ಮೃತಪಟ್ಟಿರುತ್ತಾರೆ.

2. ನಂತರ ಘಟನೆ ಸಂಬಂಧ ನಾನು ದಿಃ 27-01-2020 ರಂದು ಅಪಘಾತವಾದ ಮಾರನೇ ದಿವಸ ಮಧ್ಯಾಹ್ನ 12.30 ಗಂಟೆಯ ಸಮಯದಲ್ಲಿ ದೂರನ್ನು ನೀಡಿರುತ್ತೇನೆ. ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಿ ಅದರಲ್ಲಿ ತಮ್ಮ ಸಹಿಯನ್ನು ನೋಡಿ ಗುರುತಿಸುವಂತೆ ಕೇಳಿದಾಗ ಸಾಕ್ಷಿಯು ನೋಡಿ ಗುರುತಿಸಿದ್ದು, ಸದರಿ ದಾಖಲಾತಿ ದೂರು ಆಗಿದ್ದು, ದೂರನ್ನು ನಿಪಿ-1 ಎಂದು, ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು. ನಿಪಿ-1 ದೂರಿನ ಆಧಾರದ ಮೇಲೆ ಕುದೂರು ಪೋಲಿಸರು ದಿನಾಂಕಃ 28-01-2020 ರಂದು ಬೆಳಿಗ್ಗೆ 9 ಗಂಟೆಯ ಸಮಯದಲ್ಲಿ ಅಪಘಾತದ ಸ್ಥಳಕ್ಕೆ ಭೇಟಿ ನೀಡಿದ್ದು, ನಾನು ತೋರಿಸಿದ ಜಾಗದಲ್ಲಿ ಪೋಲಿಸರು ನನ್ನ, ಚಾಸಾ-2 ಮತ್ತು 3 ರವರ ಸಮಕ್ಷಮ ಪಂಚನಾಮೆ

ಜರುಗಿಸಿರುತ್ತಾರೆ. ಸಾಕ್ಷಿಗೆ ಇನ್ನೊಂದು ದಾಖಲಾತಿಯನ್ನು ತೋರಿಸಿ ಅದರಲ್ಲಿ ತಮ್ಮ ಸಹಿಯನ್ನು ನೋಡಿ ಗುರುತಿಸುವಂತೆ ಕೇಳಿದಾಗ ಸಾಕ್ಷಿಯು ನೋಡಿ ಗುರುತಿಸಿದ್ದು, ಸದರಿ ದಾಖಲಾತಿ ಮಹಜರ್ ಆಗಿದ್ದು, ಮಹಜರ್ ನ್ನು ನಿಪಿ-2 ಎಂದು, ಸಾಕ್ಷಿಯ ಸಹಿಯನ್ನು ನಿಪಿ-2(ಎ) ಎಂದು ಗುರುತಿಸಲಾಯಿತು.

3. ಅದೇ ದಿವಸ ದಿಃ 28-01-2020 ರಂದು ಸೋಲೂರು ಹೊರ ಪೋಲಿಸ್ ಠಾಣೆಯ ಆವರಣದಲ್ಲಿ ಅಪಘಾತ ಪಡಿಸಿದ ಟಾಟಾ ಎಸಿ ಕೆಎ-02-ಎಹೆಚ್-0319 ವಾಹನವನ್ನು ನನ್ನ, ಚಾಸಾ-2 ಮತ್ತು 3 ರವರ ಸಮಕ್ಷಮ ಮಧ್ಯಾಹ್ನ ಬೆಳಿಗ್ಗೆ 10 ರಿಂದ 10.30 ಗಂಟೆಯ ಸಮಯದಲ್ಲಿ ಅಮಾನತು ಪಂಚನಾಮೆ ಜರುಗಿಸಿ ವಾಹನವನ್ನು ಅಮಾನತು ಪಡಿಸಿಕೊಂಡಿರುತ್ತಾರೆ. ಸಾಕ್ಷಿಗೆ ಇನ್ನೊಂದು ದಾಖಲಾತಿಯನ್ನು ತೋರಿಸಿ ಅದರಲ್ಲಿ ತಮ್ಮ ಸಹಿಯನ್ನು ನೋಡಿ ಗುರುತಿಸುವಂತೆ ಕೇಳಿದಾಗ ಸಾಕ್ಷಿಯು ನೋಡಿ ಗುರುತಿಸಿದ್ದು, ಸದರಿ ದಾಖಲಾತಿ ಅಮಾನತು ಮಹಜರ್ ಆಗಿದ್ದು, ಅಮಾನತು ಮಹಜರ್ ನ್ನು ನಿಪಿ-3 ಎಂದು, ಸಾಕ್ಷಿಯ ಸಹಿಯನ್ನು ನಿಪಿ-3(ಎ) ಎಂದು ಗುರುತಿಸಲಾಯಿತು. ಸಾಕ್ಷಿಗೆ ಅಪಘಾತ ಪಡಿಸಿದ ವಾಹನದ ಒಂದು ಪೋಟೋವನ್ನು ತೋರಿಸಲಾಗಿ ಸಾಕ್ಷಿ ಇದೇ ವಾಹನ ಆದಿವಸ ನನ್ನ ಮಗ ಪುನೀತ್ ಹಾಗೂ ಚಾಸಾ-7 ರವರಿಗೆ ಡಿಕ್ಕಿ ಪಡಿಸಿದ ವಾಹನ ಆಗಿರುತ್ತದೆಂದು ನುಡಿದಿದ್ದು, ಸದರಿ ಪೋಟೋವನ್ನು ನಿಪಿ-4 ಎಂದು ಗುರುತಿಸಲಾಯಿತು.

**ಪಾಟೀ ಸವಾಲು :- ಶ್ರೀ. ಜಿ.ಪಿ.ಎಸ್ ಪರವಾಗಿ ಶ್ರೀಮತಿ. ಆರ್.ಟಿ.** ವಕೀಲರಿಂದ **ಆರೋಪಿ** ಪರವಾಗಿ :-

ಈ ಹಂತದಲ್ಲಿ ಪಾಟೀ ಸವಾಲಿಗೆ ಆರೋಪಿತರುಗಳ ಪರ ವಕೀಲರು ಸಮಯ ಕೋರಿದ್ದು, ಸದರಿಯವರ ಮನವಿಯನ್ನು ತಿರಸ್ಕರಿಸಿ, ಪಾಟೀ ಸವಾಲು ಇಲ್ಲವೆಂದು ತೆಗೆದುಕೊಳ್ಳಲಾಯಿತು.

**ಸಿ.ಸಿ. ಸಂಖ್ಯೆಃ 3413/2021**
**ಚಾಸಾ-01 / ಪ್ರಾಸಾ-01**

**ಮರು ವಿಚಾರಣೆ ಃ- ಇರುವುದಿಲ್ಲ.**

**ಓ. ಹೇ. ಕೇ. ಸ. ಇ. ಎ. ಓಪ್ಪಿರುತ್ತಾರೆ,**

**ಅ.ನ್ಯಾ.ದಂ. ಮತ್ತು ಜೆ.ಎಂ.ಎಫ್.ಸಿ. ಮಾಗಡಿ.**

# ಅಪರ ನ್ಯಾಯಿಕ ದಂಡಾಧಿಕಾರಿ ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ ಮಾಗಡಿ

## ಕ್ರಿಮಿನಲ್ ಪ್ರಕರಣ ಸಂಖ್ಯೆ ಃ 3413 / 2021

ಪಿರ್ಯಾದುದಾರರು ಃ ಕುದೂರು ಪೋಲಿಸು ಠಾಣೆ

**ವಿರುದ್ಧ**

**ಆರೋಪಿಗಳು ಃ ಶಿವಕುಮಾರ್**

**ಚಾಸಾ ಃ- 02 / ಪ್ರಾಸಾ ಃ- 02**

| | |
|---|---|
| ಹೆಸರು | **ತಿಮ್ಮರಾಜು** |
| ತಂದೆಯ / ಗಂಡನ ಹೆಸರು | **ದಾಸಪ್ಪ** |
| ವಯಸ್ಸು | **42** |
| ಉದ್ಯೋಗ | **ಚಾಲಕ** |
| ವಿಳಾಸ | **ಸೋಲೂರು** |

**ದಿನಾಂಕಃ 07-11-2023 ರಂದು** ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ ಃ- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ ಃ-**

ದಿನಾಂಕಃ 26-01-2020 ರಂದು ಬೆಳಿಗ್ಗೆ 10.55 ರ ಸಮಯದಲ್ಲಿ ಅಪಘಾತವಾಗಿದ್ದು, ನಾನು ಕುದೂರಿನ ಕಡೆಯಿಂದ ಬರುತ್ತಿದ್ದು, ದಿನಾಂಕಃ 28-01-2020 ರಂದು ಪೋಲಿಸರು ಬೆಳಿಗ್ಗೆ 9 ರಿಂದ 9.30 ರವರೆಗೆ ಸ್ಥಳ ಪಂಚನಾಮೆ ಜರುಗಿಸಿದ್ದು, ಸದರಿ ಸಮಯದಲ್ಲಿ ಚಾಸಾ-1 ಮತ್ತು 3 ರ ಸಮಕ್ಷಮ ಸ್ಥಳ ಪಂಚನಾಮೆ ಜರುಗಿಸಿರುತ್ತಾರೆ. ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಿ ಅದರಲ್ಲಿ ತಮ್ಮ ಸಹಿಯನ್ನು ನೋಡಿ ಗುರುತಿಸುವಂತೆ ಕೇಳಿದಾಗ ಸಾಕ್ಷಿಯು ನೋಡಿ ಗುರುತಿಸಿದ್ದು, ಸದರಿ ದಾಖಲಾತಿ ಮಹಜರ್ ಆಗಿದ್ದು, ಮಹಜರ್ ನ್ನು ಈಗಾಗಲೇ

ನಿಪಿ-2 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-2(ಬಿ) ಎಂದು



ಗುರುತಿಸಲಾಯಿತು. ಅದೇ ದಿವಸ ದಿಃ 28-01-2020 ರಂದು ಸೋಲೂರು ಹೊರ ಪೋಲಿಸ್ ಠಾಣೆಯ ಆವರಣದಲ್ಲಿ ಅಪಘಾತ ಪಡಿಸಿದ ಟಾಟಾ ಎಸಿ ಕೆಎ-02-ಎಹೆಚ್-0319 ವಾಹನವನ್ನು ನನ್ನ, ಚಾಸಾ-1 ಮತ್ತು 3 ರವರ ಸಮಕ್ಷಮ ಮಧ್ಯಾಹ್ನ ಬೆಳಿಗ್ಗೆ 10 ರಿಂದ 10.30 ಗಂಟೆಯ ಸಮಯದಲ್ಲಿ ಅಮಾನತು ಪಂಚನಾಮೆ ಜರುಗಿಸಿ ವಾಹನವನ್ನು ಅಮಾನತು ಪಡಿಸಿಕೊಂಡಿರುತ್ತಾರೆ. ಸಾಕ್ಷಿಗೆ ಇನ್ನೊಂದು ದಾಖಲಾತಿಯನ್ನು ತೋರಿಸಿ ಅದರಲ್ಲಿ ತಮ್ಮ ಸಹಿಯನ್ನು ನೋಡಿ ಗುರುತಿಸುವಂತೆ ಕೇಳಿದಾಗ ಸಾಕ್ಷಿಯು ನೋಡಿ ಗುರುತಿಸಿದ್ದು, ಸದರಿ ದಾಖಲಾತಿ ಅಮಾನತು ಮಹಜರ್ ಆಗಿದ್ದು, ಅಮಾನತು ಮಹಜರ್ ನ್ನು ಈಗಾಗಲೇ ನಿಪಿ-3 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-3(ಬಿ) ಎಂದು ಗುರುತಿಸಲಾಯಿತು. ಸಾಕ್ಷಿಗೆ ಅಪಘಾತ ಪಡಿಸಿದ ವಾಹನದ ಒಂದು ಪೋಟೋವನ್ನು ತೋರಿಸಲಾಗಿ ಸಾಕ್ಷಿ ಇದೇ ವಾಹನ ಆ ದಿವಸ ಪೋಲಿಸ್ ಠಾಣೆಯ ಆವರಣದಲ್ಲಿ ಅಮಾನತು ಪಡಿಸಿಕೊಂಡಿರುತ್ತಾರೆಂದು ನುಡಿದಿದ್ದು, ಸದರಿ ಪೋಟೋವನ್ನು ಈಗಾಗಲೇ ನಿಪಿ-4 ಎಂದು ಗುರುತಿಸಲಾಗಿರುತ್ತದೆ. ಸದರಿ ನಿಪಿ-4 ನ್ನು ನೋಡಿ ಗುರುತಿಸಿರುತ್ತಾರೆ.

**ಪಾಟೀ ಸವಾಲು ಃ- ಶ್ರೀ. ಜಿ.ಪಿ.ಎಸ್ ಪರವಾಗಿ ಶ್ರೀಮತಿ. ಆರ್.ಟಿ.** ವಕೀಲರಿಂದ **ಆರೋಪಿ** ಪರವಾಗಿ ಃ-

ಈ ಹಂತದಲ್ಲಿ ಪಾಟೀ ಸವಾಲಿಗೆ ಆರೋಪಿತರುಗಳ ಪರ ವಕೀಲರು ಸಮಯ ಕೋರಿದ್ದು, ಸದರಿಯವರ ಮನವಿಯನ್ನು ತಿರಸ್ಕರಿಸಿ, ಪಾಟೀ ಸವಾಲು ಇಲ್ಲವೆಂದು ತೆಗೆದುಕೊಳ್ಳಲಾಯಿತು.

**ಮರು ವಿಚಾರಣೆ ಃ- ಇರುವುದಿಲ್ಲ.**

**ಓ. ಹೇ. ಕೇ. ಸ. ಇ. ಎ. ಓಪ್ಪಿರುತ್ತಾರೆ,**

ಅ.ನ್ಯಾ.ದಂ. ಮತ್ತು ಜೆ.ಎಂ.ಎಫ್.ಸಿ. ಮಾಗಡಿ.

**ಅಪರ ನ್ಯಾಯಿಕ ದಂಡಾಧಿಕಾರಿ ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ ಮಾಗಡಿ**

## ಕ್ರಿಮಿನಲ್ ಪ್ರಕರಣ ಸಂಖ್ಯೆ : 3413 / 2021

ಪಿರ್ಯಾದುದಾರರು : ಕುದೂರು ಪೋಲಿಸು ಠಾಣೆ

**ವಿರುದ್ಧ**

**ಆರೋಪಿಗಳು : ಶಿವಕುಮಾರ್**

**ಚಾಸಾ :- 03 / ಪ್ರಾಸಾ :- 03**

| | |
|---|---|
| ಹೆಸರು | **ನಾಗರಾಜು** |
| ತಂದೆಯ / ಗಂಡನ ಹೆಸರು | **ಮಲ್ಲಯ್ಯ** |
| ವಯಸ್ಸು | **53** |
| ಉದ್ಯೋಗ | **ವ್ಯವಸಾಯ** |
| ವಿಳಾಸ | **ಒಂಭತ್ತನಗುಂಟೆ** |

**ದಿನಾಂಕ: 07-11-2023 ರಂದು** ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ :- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ :-**

ದಿನಾಂಕ: 26-01-2020 ರಂದು ಬೆಳಿಗ್ಗೆ 10.55 ರ ಸಮಯದಲ್ಲಿ ಅಪಘಾತವಾಗಿದ್ದು, ನಾನು ಸದರಿ ಒಂಭತ್ತನಗುಂಟೆ ಬಸ್ ನಿಲ್ದಾಣದ ಬಳಿ ಟಿ ಅಂಗಡಿಯ ಬಳಿ ಕುಳಿತ್ತಿದ್ದು, ಸದರಿ ಸಮಯದಲ್ಲಿ ಅಪಘಾತವಾಗಿದ್ದು, ದಿನಾಂಕ: 28-01-2020 ರಂದು ಪೋಲಿಸರು ಬೆಳಿಗ್ಗೆ 9 ರಿಂದ 10 ರವರೆಗೆ ಸ್ಥಳ ಪಂಚನಾಮೆ ಜರುಗಿಸಿದ್ದು, ಸದರಿ ಸಮಯದಲ್ಲಿ ನನ್ನ, ಚಾಸಾ-1 ಮತ್ತು ಚಾಸಾ-2 ಸಮಕ್ಷಮ ಸ್ಥಳ ಪಂಚನಾಮೆ ಜರುಗಿಸಿರುತ್ತಾರೆ. ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಿ ಅದರಲ್ಲಿ ತಮ್ಮ ಸಹಿಯನ್ನು ನೋಡಿ ಗುರುತಿಸುವಂತೆ ಕೇಳಿದಾಗ ಸಾಕ್ಷಿಯು

ನೋಡಿ ಗುರುತಿಸಿದ್ದು, ಸದರಿ ದಾಖಲಾತಿ ಮಹಜರ್ ಆಗಿದ್ದು, ಮಹಜರ್ ನ್ನು



ಈಗಾಗಲೇ ನಿಪಿ-2 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-2(ಸಿ) ಎಂದು ಗುರುತಿಸಲಾಯಿತು. ಅದೇ ದಿವಸ ದಿಃ 28-01-2020 ರಂದು ಸೋಲೂರು ಹೊರ ಪೋಲಿಸ್ ಠಾಣೆಯ ಆವರಣದಲ್ಲಿ ಅಪಘಾತ ಪಡಿಸಿದ ಟಾಟಾ ಎಸಿ ಕೆಎ-02-ಎಹೆಚ್-0319 ವಾಹನವನ್ನು ನನ್ನ, ಚಾಸಾ-1 ಮತ್ತು 3 ರವರ ಸಮಕ್ಷಮ ಮಧ್ಯಾಹ್ನ ಬೆಳಿಗ್ಗೆ 10 ರಿಂದ 10.30 ಗಂಟೆಯ ಸಮಯದಲ್ಲಿ ಅಮಾನತು ಪಂಚನಾಮೆ ಜರುಗಿಸಿ ವಾಹನವನ್ನು ಅಮಾನತು ಪಡಿಸಿಕೊಂಡಿರುತ್ತಾರೆ. ಸಾಕ್ಷಿಗೆ ಇನ್ನೊಂದು ದಾಖಲಾತಿಯನ್ನು ತೋರಿಸಿ ಅದರಲ್ಲಿ ತಮ್ಮ ಸಹಿಯನ್ನು ನೋಡಿ ಗುರುತಿಸುವಂತೆ ಕೇಳಿದಾಗ ಸಾಕ್ಷಿಯು ನೋಡಿ ಗುರುತಿಸಿದ್ದು, ಸದರಿ ದಾಖಲಾತಿ ಅಮಾನತು ಮಹಜರ್ ಆಗಿದ್ದು, ಅಮಾನತು ಮಹಜರ್ ನ್ನು ಈಗಾಗಲೇ ನಿಪಿ-3 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-3(ಸಿ) ಎಂದು ಗುರುತಿಸಲಾಯಿತು. ಸಾಕ್ಷಿಗೆ ಅಪಘಾತ ಪಡಿಸಿದ ವಾಹನದ ಒಂದು ಪೋಟೋವನ್ನು ತೋರಿಸಲಾಗಿ ಸಾಕ್ಷಿ ಇದೇ ವಾಹನ ಆ ದಿವಸ ಪೋಲಿಸ್ ಠಾಣೆಯ ಆವರಣದಲ್ಲಿ ಅಮಾನತು ಪಡಿಸಿಕೊಂಡಿರುತ್ತಾರೆಂದು ನುಡಿದಿದ್ದು, ಸದರಿ ಪೋಟೋವನ್ನು ಈಗಾಗಲೇ ನಿಪಿ-4 ಎಂದು ಗುರುತಿಸಲಾಗಿರುತ್ತದೆ. ಸದರಿ ನಿಪಿ-4 ನ್ನು ನೋಡಿ ಗುರುತಿಸಿರುತ್ತಾರೆ.

**ಪಾಟೀ ಸವಾಲು ಃ- ಶ್ರೀ. ಜಿ.ಪಿ.ಎಸ್ ಪರವಾಗಿ ಶ್ರೀಮತಿ. ಆರ್.ಟಿ.** ವಕೀಲರಿಂದ **ಆರೋಪಿ** ಪರವಾಗಿ ಃ-

ಈ ಹಂತದಲ್ಲಿ ಪಾಟೀ ಸವಾಲಿಗೆ ಆರೋಪಿತರುಗಳ ಪರ ವಕೀಲರು ಸಮಯ ಕೋರಿದ್ದು, ಸದರಿಯವರ ಮನವಿಯನ್ನು ತಿರಸ್ಕರಿಸಿ, ಪಾಟೀ ಸವಾಲು ಇಲ್ಲವೆಂದು ತೆಗೆದುಕೊಳ್ಳಲಾಯಿತು.

**ಮರು ವಿಚಾರಣೆ ಃ- ಇರುವುದಿಲ್ಲ.**

**ಓ. ಹೇ. ಕೇ. ಸ. ಇ. ಎ. ಒಪ್ಪಿರುತ್ತಾರೆ,**

**ಅ.ನ್ಯಾ.ದಂ. ಮತ್ತು ಜೆ.ಎಂ.ಎಫ್.ಸಿ. ಮಾಗಡಿ.**